ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 491

ಮಾನ್ಯ ಸದಸ್ಯರ ಹೆಸರು : ಶ್ರೀ ಎಸ್.ಆರ್. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ವಿಷಯ : ಬಾದಾಮಿಯಲ್ಲಿ ಚಾಲುಕ್ಯ ಅಭಿವೃದ್ಧಿ ಪ್ರಾಧಿಕಾರದ ಪ್ರಗತಿ ಕುರಿತು

ಉತ್ತರಿಸುವ ದಿನಾಂಕ : 22/07/2019

ಉತ್ತರಿಸುವ ಸಚಿವರು : ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ.
(1)	(2)	(3)
ಅ.	ಈ ಹಿಂದಿನ ಸರ್ಕಾರವು ತನ್ನ ಮುಂಗಡ ಪತ್ರದಲ್ಲಿ ಹಂಪಿ ಮಾದರಿಯಂತೆ ಬಾದಾಮಿಯಲ್ಲಿ ಚಾಲುಕ್ಯ ಅಭಿವೃದ್ಧಿ ಪ್ರಾಧಿಕಾರಕ್ಕೆ ಮಂಜೂರಾತಿ ನೀಡಿದ್ದು, ಅದಕ್ಕಾಗಿ ಮೀಸಲಾಗಿಟ್ಟ ಹಣ ಎಷ್ಟು; (ಸಂಪೂರ್ಣ ವಿವರವನ್ನು ಒದಗಿಸುವುದು)	(see table below)
(ಬಿ)	ಚಾಲುಕ್ಯ ಅಭಿವೃದ್ಧಿ ಪ್ರಾಧಿಕಾರವನ್ನು ಅಭಿವೃದ್ಧಿಪಡಿಸಲು ಸರ್ಕಾರ ಇಲ್ಲಿಯವರೆಗೆ ಕೈಗೊಂಡ ಕ್ರಮಗಳೇನು;	1. ಸರ್ಕಾರದ ಆದೇಶ ಸಂಖ್ಯೆ: ಕಸಂವಾ 21 ಕೆಎಂಯು 2018, ಬೆಂಗಳೂರು, ದಿನಾಂಕ:27.03.2018ರ ಪ್ರಕಾರ ಬಾದಾಮಿ, ಐಹೊಳೆ, ಪಟ್ಟದಕಲ್ಲುಗಳನ್ನೊಳಗೊಂಡ ಚಾಲುಕ್ಯ ಪ್ರಾಧಿಕಾರಕ್ಕೆ ಎಂಟು ಹುದ್ದೆಗಳನ್ನು ಸೃಜಿಸಿ ಸರ್ಕಾರದ ಆದೇಶವಾಗಿರುತ್ತದೆ. 2. ಸರ್ಕಾರದ ಅಧಿಸೂಚನೆ ಸಂಖ್ಯೆ: ಕಸಂವಾ 101 ಕೆಎಂಯು 2018 ಬೆಂಗಳೂರು, ದಿನಾಂಕ : 27.02.2019ರ ಪ್ರಕಾರ ಆಯುಕ್ತರು, ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ, ಮೈಸೂರು ಇವರನ್ನು ಆಯುಕ್ತರು, ಚಾಲುಕ್ಯ ಅಭಿವೃದ್ಧಿ ಪ್ರಾಧಿಕಾರ, ಬಾಗಲಕೋಟೆ ಹುದ್ದೆಯಲ್ಲಿ ಅಧಿಕ ಪ್ರಭಾರದಲ್ಲಿರಿಸಿ ಹಾಗೂ ಉಪ ನಿರ್ದೇಶಕರು, ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ, ಧಾರವಾಡ ಇವರನ್ನು, ಉಪ ನಿರ್ದೇಶಕರು, ಚಾಲುಕ್ಯ ಅಭಿವೃದ್ಧಿ ಪ್ರಾಧಿಕಾರ, ಬಾಗಲಕೋಟೆ ಹುದ್ದೆಯಲ್ಲಿ ಅಧಿಕ ಪ್ರಭಾರದಲ್ಲಿರಿಸಿ ಆದೇಶಿಸಿದೆ.

Answer (ಅ):

ವರ್ಷ	ಆಯವ್ಯಯದಲ್ಲಿ ನಿಗಧಿಪಡಿಸಿದ ಅನುದಾನ	ಪ್ರಾಧಿಕಾರದಲ್ಲಿ ಲಭ್ಯವಿರುವ ಅನುದಾನ
2015-16	100.00	0.00
2016-17	50.00	0.00
2017-18	100.00	0.00
2018-19	50.00	25.00

(2..

(1)	(2)	(3)
		3. 2019-20ನೇ ಸಾಲಿನ ಇಲಾಖೆಯ ಕ್ರಿಯಾ ಯೋಜನೆಯಲ್ಲಿ ಚಾಲುಕ್ಯ ಪ್ರಾಧಿಕಾರಕ್ಕೆ ರೂ.50.00ಲಕ್ಷಗಳನ್ನು ನಿಗಧಿ ಪಡಿಸಲಾಗಿರುತ್ತದೆ. ಈ ಅನುದಾನದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮ ಜರುಗಿಸಲಾಗುವುದು.
ಇ.	ಒಂದು ವೇಳೆ ಚಾಲುಕ್ಯ ಅಭಿವೃದ್ಧಿ ಪ್ರಾಧಿಕಾರವು ಪೂರ್ತಿಯಾಗಿ ಕಾರ್ಯರೂಪಕ್ಕೆ ಬರದೇ ಇದ್ದಲ್ಲಿ ಅದಕ್ಕೆ ಕಾರಣಗಳೇನು?	ಪೂರ್ಣ ಪ್ರಮಾಣದ ಚಾಲುಕ್ಯ ಅಭಿವೃದ್ಧಿ ಪ್ರಾಧಿಕಾರ ಪೂರ್ತಿಯಾಗಿ ಕಾರ್ಯರೂಪಕ್ಕೆ ಬಂದಿರುತ್ತದೆ.

ಪ್ರಇ 38 ಪ್ರವಾವಿ 2019

(ಸಾ.ರಾ.ಮಹೇಶ್)
ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು.